ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕ. ವಿ. ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 24/9/20

# ಎಪಿಎಂಸಿ ಕಾಯ್ದೆ ಕರಡು ಪರಿಷ್ಕರಣೆಗೆ ಅನುಮೋದನೆ

ವಿಧಾನ ಸಭೆ: ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರಗಳ ಕುರಿತು ಕೇಂದ್ರ ಸರ್ಕಾರ ಈಗಾಗಲೇ ಅಧಿಸೂಚನೆ



ಹೊರಡಿಸಿರುವುದರಿಂದ ಈ ಹಿಂದೆ ವಿಧಾನ ಸಭೆಯಲ್ಲಿ ಅಂಗೀಕಾರ ಗೊಂಡಿರುವ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ-2020 ಅನ್ನು ವಿಧಾನ ಪರಿಷತ್‌ನಲ್ಲಿ ಮಂಡಿಸಿ, ಕಾಯ್ದೆಯ ಕರಡು ಪರಿಷ್ಕರಣೆಗೆ ಅನುಮೋದನೆ ಪಡೆಯಲಾಯಿತು. ಸಹಕಾರಿ ಸಚಿವ ಎಸ್.ಟಿ. ಸೋಮಶೇಖರ್ ಅವರು ವಿಧೇಯಕ ಮಂಡಿಸಿ, ವಿಧೇಯಕಕ್ಕೆ ಅನುಮೋದನೆ ಸೂಚಿಸುವಂತೆ ಮನವಿ ಮಾಡಿದರು. ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಮಾತನಾಡಿ, ಈ ಕಾಯ್ದೆಯಡಿ ಕೃಷಿ ಉತ್ಪನ್ನ ದಾಸ್ತಾನು ಸಂಬಂಧ ಕೇಂದ್ರ ಸರ್ಕಾರ ಕೆಲ ನಿರ್ದಿಷ್ಟ ಸೂಚನೆ ನೀಡಿದೆ. ಹೀಗಾಗಿ ನಾವು ತಂದಿರುವ ಕಾಯ್ದೆಯಲ್ಲಿ ಕೇಂದ್ರದ ನಿಯಮಕ್ಕೆ ವ್ಯತಿರಿಕ್ತವಾಗುವ ಸಾಧ್ಯತೆಯಿದೆ. ಅಲ್ಲದೆ, ಇದಕ್ಕೆ ಬದಲಾವಣೆ ತರಬೇಕಿರುವುದರಿಂದ ಅಂಗೀಕರಿಸಿ, ಕರಡು ಪರಿಷ್ಕರಣೆಗೆ ಅವಕಾಶ ಮಾಡಿಕೊಡಬೇಕು ಎಂದು ಕೋರಿದರು. ಆದರಂತೆ ಸದನವು ಧ್ವನಿಮತದ ಮೂಲಕ ವಿಧೇಯಕ ಅಂಗೀಕರಿಸಲು ಒಪ್ಪಿಗೆ ಸೂಚಿಸಿತು.

# ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕ ಮಂಡನೆ

ವಿಧಾನಸಭೆ: ಗ್ರಾ.ಪಂ., ತಾ.ಪಂ., ಹಾಗೂ ಜಿ.ಪಂ. ಅಧ್ಯಕ್ಷ ಉಪಾಧ್ಯಕ್ಷರ ಅವಧಿಯನ್ನು 30 ತಿಂಗಳಿಗೆ ಇಳಿಸುವ ಸಂಬಂಧ 'ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ವಿಧೇಯಕ-2020' ಅನ್ನು ವಿಧಾನಸಭೆಯಲ್ಲಿ ಮಂಡಿಸಲಾಗಿದೆ. ಬುಧವಾರ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ಅವರು ವಿಧೇಯಕ ಮಂಡಿಸಿದರು. ಇದನ್ನು ಹೊರತುಪಡಿಸಿ ಪ್ರತಿಪಕ್ಷ ಸದಸ್ಯರ ಗೈರು ಹಾಜರಿಯಲ್ಲಿ ಸಂಪುಟ ಸಭೆಯ ತೀರ್ಮಾನದಂತೆ ಹೆಚ್ಚುವರಿ 33 ಸಾವಿರ ಕೋಟಿ ರೂ. ಸಾಲ ತೆಗೆದುಕೊಳ್ಳುವ ಸಂಬಂಧ ಕರ್ನಾಟಕ ಆರ್ಥಿಕ ಹೊಣೆಗಾರಿಕೆ(ತಿದ್ದುಪಡಿ) ವಿಧೇಯಕ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ವಿಧೇಯಕವನ್ನು ಸಿಎಂ ಯಡಿಯೂರಪ್ಪ ಮಂಡಿಸಿದರು. ಭೂಸುಧಾರಣೆಗಳ 2ನೇ ತಿದ್ದುಪಡಿ, ಸರಕು ಮತ್ತು ಸೇವೆ ತಿದ್ದುಪಡಿ, ಸಿವಿಲ್ ಸೇವೆಗಳು(ತಾಂತ್ರಿಕ ಶಿಕ್ಷಣ), ಸಿವಿಲ್ ಸೇವೆಗಳು(ಕಾಲೇಜು ಶಿಕ್ಷಣ), ಭೂಕಬಳಿಕೆ ನಿಷೇಧ, ಭೂಕಂದಾಯ ತಿದ್ದುಪಡಿ, ಕರ್ನಾಟಕ ಸ್ಟಾಂಪ್ ತಿದ್ದುಪಡಿ, ನಗರಪಾಲಿಕೆಗಳ ತಿದ್ದುಪಡಿ, ರಾಜ್ಯ ವಿವಿಗಳ ಮತ್ತು ಇತರ ಕಾನೂನು ತಿದ್ದುಪಡಿ ವಿಧೇಯಕಗಳನ್ನು ಸಂಬಂಧ ಪಟ್ಟ ಇಲಾಖೆಗಳ ಸಚಿವರ ಪರವಾಗಿ ಸಚಿವ ಜೆ.ಸಿ.ಮಾಧುಸ್ವಾಮಿ ಮಂಡಿಸಿದರು.